ನೇಮಕಾತಿಯನ್ನು ಆಡಳಿತ ಮಂಡಳಿಯವರಿಂದ ನೇರ ನೇಮಕಾತಿ, ಗುತ್ತಿಗೆ ಆಧಾರ ಅಥವಾ ನಾಮನಿರ್ದೇಶನದ ಮೂಲಕ ಮಾಡಿಕೊಳ್ಳಲಾಗುತ್ತದೆ. ವಯೋಮಿತಿ 58 ವರ್ಷಗಳು. ಕೆಲವು ವಿಶಿಷ್ಟ ಸಂದರ್ಭಗಳಲ್ಲಿ ಈ ವಯೋಮಿತಿಯನ್ನು ಸಡಿಲಗೊಳಿಸಬಹುದು.

ವೈದ್ಯಕೀಯ ಶಿಕ್ಷಣ ಇಲಾಖೆಗೆ ಸಂಬಂಧಪಟ್ಟಂತೆ ಕರ್ನಾಟಕ ವೈದ್ಯಕೀಯ ಕಾಲೇಜು ಹುಬ್ಬಳ್ಳಿ, ಮತ್ತು ಸರ್ಕಾರಿ ವೈದ್ಯಕೀಯ ಕಾಲೇಜು ಬಳ್ಳಾರಿ ಇವುಗಳನ್ನು ಸ್ವಾಯತ್ತ ಸಂಸ್ಥೆಗಳನ್ನಾಗಿ ಪರಿವರ್ತಿಸಲಾಗಿದೆ. ಸದರಿ 2 ಸಂಸ್ಥೆಗಳಿಗೆ ನಿರ್ದೇಶಕರುಗಳನ್ನು ನೇಮಕ ಮಾಡಲು ವಯೋಮಿತಿಯನ್ನು 56 ವರ್ಷಗಳಿದ್ದು, ವಿಶೇಷ ಪ್ರಕರಣಗಳಲ್ಲಿ 57 ವರ್ಷಗಳವರೆಗೆ ಸಡಲಿಸಬಹುದು.

ಶಿಗ್ಗಾಂವ್ ಹಾಗೂ ಸವಣೂರು ತಾಲ್ಲೂಕುಗಳಲ್ಲಿ ಆಶ್ರಯ, ಅಂಬೇಡ್ಕರ್ ಹಾಗೂ ಇಂದಿರಾ ಅವಾಸ್ ಯೋಜನೆಯಡಿಯಲ್ಲಿ ಮನೆಗಳ ಹಂಚಿಕೆ.

ಶ್ರೀ ಮಂಜುನಾಥ್ ಸಿ. ಕುನ್ನೂರು (ಶಿಗ್ಗಾಂವ್) : ಶಿಗ್ಗಾಂವ್ ಹಾಗೂ ಸವಣೂರು ತಾಲ್ಲೂಕುಗಳಲ್ಲಿ ಆಶ್ರಯ, ಅಂಬೇಡ್ಕರ್ ಹಾಗೂ ಇಂದಿರಾ ಅವಾಸ್ ಯೋಜನೆಗಳಡಿಯಲ್ಲಿ ಮನೆಗಳನ್ನು ಹಂಚಿಕೆ ಮಾಡುವಲ್ಲಿ ಅರ್ಹ ಫಲಾನುಭವಿಗಳನ್ನು ಸರಿಯಾಗಿ ಗುರ್ತಿಸದಿರುವುದರಿಂದಾಗಿ ಮನೆಗಳು ನ್ಯಾಯವಾಗಿ ದೊರೆಯಬೇಕಾಗಿರುವವರಿಗೆ ದೊರೆಯದ ಸಾರ್ವಜನಿಕರಿಂದ ಅನೇಕ ದೂರುಗಳು ಬಂದಿವೆ. ಹಾಗೂ ಫಲಾನುಭವಿಗಳ ಆಯ್ಕೆಯನ್ನು ಶಿಗ್ಗಾಂವ್ ಸವಣೂರು ಹಾಗೂ ಧಾರವಾಡ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ನೇರವಾಗಿ ತಾಲ್ಲೂಕು ಪಂಚಾಯಿತಿಗೆ ಅಧಿಕಾರ ಕೊಟ್ಟಿದ್ದು ಗ್ರಾಮ ಸಭೆ ಹಾಗೂ ಗ್ರಾಮ ಪಂಚಾಯಿತಿ ಸದಸ್ಯರ ಅಭಿಪ್ರಾಯ ಪಡೆಯದೆ ಫಲಾನುಭವಿಗಳ ಆಯ್ಕೆ ಮಾಡಿದ್ದು, ಕಾನೂನು ಬಾಹಿರವಾಗಿರುತ್ತದೆ. ಈ ಬಗ್ಗೆ ಈಗಾಗಿರುವ ಅನ್ಯಾಯವನ್ನು ಸರಿಪಡಿಸುವುದಕ್ಕೆ ಸಂಬಂಧಿಸಿದಂತೆ ಸರ್ಕಾರ ಸದನಕ್ಕೆ ಹೇಳಿಕೆ ನೀಡಬೇಕೆಂದು ಒತ್ತಾಯಿಸುತ್ತೇನೆ.

ಶಾಸನ ರಚನಾ ಕಾರ್ಯಕಲಾಪಗಳು

(ಎ) ವಿಧೇಯಗಳ ಮಂಡನೆ

(1) ಬೆಂಗಳೂರು ಅರಮನೆ (ಅರ್ಜನೆ ಮತ್ತು ವರ್ಗಾವಣೆ) ವಿಧೇಯಕ, 1996

ಶ್ರೀ ಎಂ. ಪಿ. ಪ್ರಕಾಶ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು (ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೇ, 1996 ನೇ ಸಾಲಿನ ಬೆಂಗಳೂರು ಅರಮನೆ (ಅರ್ಜನೆ ಮತ್ತು ವರ್ಗಾವಣೆ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"1996ನೇ ಸಾಲಿನ ಬೆಂಗಳೂರು ಅರಮನೆ (ಅರ್ಜನೆ ಮತ್ತು ವರ್ಗಾವಣೆ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ. ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು) : 1996ನೇ ಸಾಲಿನ ಬೆಂಗಳೂರು ಅರಮನೆ (ಅರ್ಜನೆ ಮತ್ತು ವರ್ಗಾವಣೆ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : **ವಿಧೇಯಕವನ್ನು ಮಂಡಿಸಲಾಗಿದೆ.**

(2) ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕ 1996

ಶ್ರೀ ಸಿದ್ದರಾಮಯ್ಯ (ಹಣಕಾಸು ಮಂತ್ರಿಗಳು) : 1996ನೇ ಸಾಲಿನ ಕರ್ನಾಟಕ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"1996ನೇ ಸಾಲಿನ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಸಿದ್ದರಾಮಯ್ಯ (ಹಣಕಾಸು ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1996ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : **ವಿಧೇಯಕವನ್ನು ಮಂಡಿಸಲಾಯಿತು.**

ಕರ್ನಾಟಕ ಧಾರ್ಮಿಕ ಕಟ್ಟಡಗಳ ಮತ್ತು ಸ್ಥಳಗಳ ವಿಧೇಯಕ, 1996

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಗೃಹ ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, "1996ರ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ".

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"1996ರ ಕರ್ನಾಟಕ ಧಾರ್ಮಿಕ ಕಟ್ಟಡಗಳ ಮತ್ತು ಸ್ಥಳಗಳ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಗೃಹ ಮಂತ್ರಿಗಳು) : ಮಾನ್ಯ ಅಧ್ಯಕ್ಷರೇ, 1996ರ ಕರ್ನಾಟಕ ಧಾರ್ಮಿಕ ಕಟ್ಟಡಗಳ ಮತ್ತು ಸ್ಥಳಗಳ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಯಿತು